## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 722 (831)

ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19.08.2025

ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಭದ್ರಾವತಿ ಎಂ.ಪಿ.ಎಂ. ಸಕ್ಕರೆ ಕಾರ್ಖಾನೆ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ, ಸದರಿ ಕಾರ್ಖಾನೆಯನ್ನು ಪುನಶ್ಚೇತನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;<br>ಪುನಶ್ಚೇತನಗೊಳಿಸಲು ಎಷ್ಟು ಅನುದಾನ ಬೇಕಾಗಬಹುದು; | ಮೈಸೂರು ಕಾಗದ ಕಾರ್ಖಾನೆಯು ತೀವ್ರತರಹದ ಹಣಕಾಸಿನ ಸಮಸ್ಯೆಯನ್ನು ಎದುರಿಸುತ್ತಿದ್ದು, ಸರ್ಕಾರವು ಕಾರ್ಖಾನೆಯನ್ನು ಪುನರುಜ್ಜೀವನಗೊಳಿಸಲು ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡಿರುತ್ತದೆ. ಅದರಂತೆ, ಕಾರ್ಖಾನೆಯ ಎಲ್ಲಾ ಉತ್ಪಾದನಾ ಘಟಕಗಳನ್ನು 2015-2016 ರಿಂದ ಸ್ಥಗಿತಗೊಳಿಸಲಾಗಿರುತ್ತದೆ. ಇದರ ಪ್ರಸ್ತುತ ಲೆಕ್ಕ ಪರಿಶೋಧನೆಯಲ್ಲದ ಅಂದಾಜು ನಷ್ಟ ದಿನಾಂಕ: 30.06.2024ರ ಅಂತ್ಯಕ್ಕೆ ರೂ. 1541.54 ಕೋಟಿಗಳಷ್ಟು ಇರುತ್ತದೆ.<br><br>ಸರ್ಕಾರವು ಮೈಸೂರು ಕಾಗದ ಕಾರ್ಖಾನೆಯ ಪುನರುಜ್ಜೀವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮೆ\|\| ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಆರ್.ಎಫ್.ಕ್ಯೂ. ಅನ್ನು ಏಪ್ರಿಲ್ 2017, ಆಗಸ್ಟ್ 2018 ಹಾಗೂ ಮಾರ್ಚ್ 2019 ರಲ್ಲಿ ಪ್ರಕಟಿಸಲಾಗಿತ್ತು. ಆರ್.ಎಫ್.ಕ್ಯೂ.ಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ.<br><br>ಆರ್.ಎಫ್.ಕ್ಯೂ. ಅನ್ನು ಕಂಪನಿಯು ಮೊದಲೇ ಅಪ್‌ಲೋಡ್ ಮಾಡಲಾಗಿದ್ದು ಮತ್ತು ಆರ್.ಎಫ್.ಕ್ಯೂ. ಗಾಗಿ ಈಗಾಗಲೇ ವ್ಯಾಪಕ ಪ್ರಚಾರವನ್ನು ನೀಡಲಾಗಿರುವುದರಿಂದ ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) ನೇರವಾಗಿ ದಿನಾಂಕ 25.11.2020 ರಂದು ಅಪ್‌ಲೋಡ್ ಮಾಡಲಾಗಿದ್ದು, ಇ-ಟೆಂಡರ್ ತೆರೆದಾಗ ಯಾವುದೇ ಬಿಡ್‌ಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| | | ದಿನಾಂಕ: 07.09.2023 ರಂದು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆದಿರುತ್ತದೆ. ಈ ಸಭೆಯಲ್ಲಿ ತೀರ್ಮಾನಿಸಿದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಹ ದಿ:17.11.2023 ರಂದು ಸಭೆ ನಡೆಸಿದ್ದು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ:<br><br>[1] ಅರಣ್ಯ ಇಲಾಖೆಯ ತಜ್ಞರ ಸಮಿತಿಯು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ನೀಡುವ ಸಂಬಂಧ ಪರಿಶೀಲಿಸಿ ವರದಿ ನೀಡಬೇಕಾಗಿದೆ.<br><br>[2] KPTCL / MESCOM ಗೆ ಪಾವತಿ ಮಾಡಬೇಕಾದ ವಿದ್ಯುತ್ ಶುಲ್ಕ ಮತ್ತು ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲು ಕ್ರಮ ಕೈಗೊಳ್ಳುವಂತೆ ಇಂಧನ ಇಲಾಖೆಯನ್ನು ದಿನಾಂಕ 08.01.2024 ರಂದು ಕೋರಲಾಗಿದೆ. ಇಂಧನ ಇಲಾಖೆಯು ದಿನಾಂಕ: 05.04.2024ರ ಪತ್ರದಲ್ಲಿ ವಿದ್ಯುತ್ ಬಿಲ್ಲಿನ ಬಾಬ್ತು ಅಸಲು ಮತ್ತು ಬಡ್ಡಿ ಮೊತ್ತವನ್ನು ಮನ್ನಾ ಮಾಡಲು ಸಾಧ್ಯವಿರುವುದಿಲ್ಲ ಎಂದು ತಿಳಿಸಿರುತ್ತಾರೆ. ವಿಷಯವು ಪರಿಶೀಲನೆಯಲ್ಲಿದೆ.<br><br>[3] ಕಂಪನಿಯ ಸಾಲಗಳು/ಬಾಕಿಗಳ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.<br><br>ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂ.ಪಿ.ಎಂ.ಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸುವುದರಿಂದ ಅದರಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು ತದನಂತರ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ. |
| (ಇ) | ಎಂ.ಪಿ.ಎಂ. ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ಬೆಳೆಗಾರರಿಗೆ ನೀಡಬೇಕಾದ ಬಾಕಿ ಮೊತ್ತ ಎಷ್ಟು; ಇದನ್ನು ರೈತರಿಗೆ ನೀಡದಿರಲು ಕಾರಣಗಳೇನು? (ವಿವರ ನೀಡುವುದು) | ಎಂ.ಪಿ.ಎಂ. ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ಬೆಳೆಗಾರರಿಗೆ ಸರ್ಕಾರವು ನಿಗದಿಪಡಿಸಿದ ಪ್ರತಿ ಟನ್ ಕಬ್ಬಿನ ಕನಿಷ್ಠ ಬೆಂಬಲ ದರ (MSP) ವನ್ನು ಪಾವತಿಸಲಾಗಿದೆ. ಸಂಸ್ಥೆಯಿಂದ ಸದರಿ ರೈತರಿಗೆ ನೀಡಬೇಕಾದ ಬಾಕಿ ಯಾವುದೂ ಇರುವುದಿಲ್ಲ. |

ಸಂಖ್ಯೆ: ಸಿಐ 46 ಸಿಪಿಎಂ 2025 (ಇ)

(ಎಂ.ಬಿ ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು.